**<u>1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ವಿಶೇಷ ನ್ಯಾಯಾಲಯ, ಬಳ್ಳಾರಿ</u>**

**<u>ವಿಶೇಷ ಮೊಕದ್ದಮೆ ಸಂಖ್ಯೆಃ- 215/2024</u>**

**ಪ್ರಾಸಾಃ-17** ಹೆಚ್ಚುವರಿ ಸಾಕ್ಷಿ

| | | |
|---|---|---|
| ಸಾಕ್ಷಿಯ ಹೆಸರು | : | ನಾಗರಾಜ್ |
| ತಂದೆಯ ಹೆಸರು | : | ರಂಗಪ್ಪ.ಸಿ |
| ವಯಸ್ಸು | : | 46 ವರ್ಷ |
| ವೃತ್ತಿ | : | ಸಿ ಪಿ ಐ, ಮೊಳಕಾಲ್ಮೂರು ವೃತ್ತ |
| ವಾಸಸ್ಥಳ | : | ಮೊಳಕಾಲ್ಮೂರು |

**ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ- 30.7.2026**
**ಮುಖ್ಯ ವಿಚಾರಣೆಃ ವಿಶೇಷ ಅಭಿಯೋಜಕರಿಂದ**

ನಾನು ನವೆಂಬರ್ 2019 ರಿಂದ ಜನವರಿ 2022 ರವರೆಗೆ ಬ್ರೂಸ್‌ಪೇಟೆ ಪೋಲೀಸ್ ಠಾಣೆಯಲ್ಲಿ ಪಿ ಐ ಆಗಿ ಕೆಲಸ ಮಾಡಿದ್ದೇನೆ.

ದಿಃ 28-4-2020 ರಂದು ಮದ್ಯಾಹ್ನ 12-30 ಗಂಟೆ ಸಮಯಕ್ಕೆ ನಾನು ಠಾಣೆಯಲ್ಲಿದ್ದಾಗ ಈ ಕೇಸಿನ ದೂರುದಾರರು ಠಾಣೆಗೆ ಬಂದು ನಿಪಿ-1 ರಂತೆ ಸಲ್ಲಿಸಿದ ದೂರನ್ನು ಸ್ವೀಕರಿಸಿ ಅದರ ಆಧಾರದಲ್ಲಿ ಠಾಣಾ ಮೊಕದ್ದಮೆ ಸಂಖ್ಯೆಃ 93/2020 ರಂತೆ ಪ್ರಥಮ ವರ್ತಮಾನ ವರದಿ ತಯಾರಿಸಿ ಮಾನ್ಯ ನಾಯಾಲಯಕ್ಕೆ ಮತ್ತು ನನ್ನ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡೆ. ಸಾಕ್ಷಿಯ ಸಹಿಯನ್ನು ನಿಪಿ1(ಬಿ) ಎಂದು ಮತ್ತು ಪ್ರಥಮ ವರ್ತಮಾನ ವರದಿಯನ್ನು ನಿಪಿ-60 ಎಂದು ಗುರುತಿಸಲಾಯಿತು. ನಂತರ ಮುಂದಿನ ತನಿಖೆಯ ಬಗ್ಗೆ ದಾವಣಗೆರೆ ಸಿ ಆರ್ ಇ ಸೆಲ್ ನವರಿಗೆ ಕಳುಹಿಸಿಕೊಟ್ಟೆ.

**<u>ಪಾಟೀ ಸವಾಲು: ಆರೋಪಿತರ ಪರ ಶ್ರೀ ವಿ ಹೆಚ್ ಮತ್ತು ಎಂ ಹೆಚ್ ವಕೀಲರಿಂದ:</u>**

ದೂರನ್ನು ಪಿ ಎಸ್ ಐ ರವರು ಸಲ್ಲಿಸಿದ್ದಾರೆ ಎಂದರೆ ಸರಿ. ದೂರಿನ ಜೊತೆ ಯಾವುದೇ ದಾಖಲೆ ಹಾಜರು ಮಾಡಿಲ್ಲ. ಈ ಪ್ರಕರಣಕ್ಕೂ ಆರೋಪಿಗಳಿಗೂ ಯಾವುದೇ ಸಂಬಂಧ ಇಲ್ಲದೇ ಇದ್ದರೂ ದೂರುದಾರರು ಪೊಲೀಸ್ ಆಗಿರುವ ಕಾರಣ ಸುಳ್ಳು ಕೇಸು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು).**

ಓ. ಹೇ. ಕೆ. ಸರಿ ಇದೆ.

**1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ವಿಶೇಷ ನ್ಯಾಯಾಲಯ, ಬಳ್ಳಾರಿ.**